# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ/506/ಗ್ರಾಪಂಅ/2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:02-08-2018.

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

ಇವರಿಗೆ:

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು

ಮಾನ್ಯರೆ,

ವಿಷಯ: ಗ್ರಾಮ ಪಂಚಾಯತಿಗಳು ಜಾಹಿರಾತುಗಳ ಮೇಲೆ ತೆರಿಗೆ ವಿಧಿಸದಿರುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, Popular Advertisers & Outdoor Advertising Association, Bangalore ಇವರು ಸರ್ಕಾರಕ್ಕೆ ಸಲ್ಲಿಸಿರುವ ಮನವಿಯಲ್ಲಿ 2016 ರಲ್ಲಿ 101ನೇ ಸಂವಿಧಾನ ತಿದ್ದುಪಡಿ ತಂದು ಸರಕು ಮತ್ತು ಸೇವಾ ತೆರಿಗೆಯು ದಿನಾಂಕ:01-07-2017 ರಿಂದ ಜಾರಿಗೆ ತರಲಾಗಿದ್ದು, ತೆರಿಗೆ ಸಂಬಂಧಪಟ್ಟಂತೆ ತಿದ್ದುಪಡಿ ತರಲಾಗಿದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರಲ್ಲಿ ಗ್ರಾಮ ಪಂಚಾಯತಿಗಳು ಜಾಹೀರಾತುಗಳಿಗೆ ತೆರಿಗೆ ವಿಧಿಸುವುದನ್ನು ಕೈಬಿಡುವಂತೆ ಕೋರಿರುತ್ತಾರೆ.

ಈ ಬಗ್ಗೆ ಪರಿಶೀಲಿಸಲಾಗಿದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 199 (3) (ಸಿ) ರಲ್ಲಿ ಗ್ರಾಮ ಪಂಚಾಯತಿಗಳು ಜಾಹೀರಾತುಗಳ ಮೇಲೆ ತೆರಿಗೆ ವಿಧಿಸುವುದನ್ನು ಮತ್ತು ಅನುಸೂಚಿ-IV ರ ಸಿ ಅನ್ನು, ದಿನಾಂಕ:12-07-2017 ರಲ್ಲಿ ತಿದ್ದುಪಡಿ ತಂದು ಕೈಬಿಡಲಾಗಿರುವುದರಿಂದ ಗ್ರಾಮ ಪಂಚಾಯತಿಗಳು ಜಾಹಿರಾತುಗಳ ಮೇಲೆ ತೆರಿಗೆ ವಿಧಿಸಲು ಅವಕಾಶವಿರುವುದಿಲ್ಲವೆಂದು ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

3/8

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು ಮಾಹಿತಿಗಾಗಿ:

1) ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳು.
2) ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು.
3) ಕಛೇರಿ ಕಡತ